## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-23ರಲ್ಲಿ ಘೋಷಿಸಿರುವಂತೆ ಸೆಕೆಂಡರಿ ಕೃಷಿ ನಿರ್ದೇಶನಾಲಯ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವ ಬಗ್ಗೆ.

**ಓದಲಾಗಿದೆ:**

1. 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-23.
2. ಸರ್ಕಾರದ ಆದೇಶ ಸಂಖ್ಯೆ:ASC 73 2021 (P-3), ದಿನಾಂಕ:18-01-2022.
3. ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ:ಆಇ 51 ವೆಚ್ಚ-4/2022, ದಿನಾಂಕ:05-04-2022.
4. ಆಯುಕ್ತರು, ಕೃಷಿ ಇಲಾಖೆ ರವರ ಪತ್ರ ಸಂಖ್ಯೆ:ಪಿಎಲ್ ಎನ್/ತಾಂ-1/ಆ.ಘೋ.& ಹೊ.ಯೋ/2022-23, ದಿ:01-04-2022.
5. ಆರ್ಥಿಕ ಇಲಾಖೆಯ ಹಿಂಬರಹ ಟಿಪ್ಪಣಿ ಸಂಖ್ಯೆ:ಆಇ 207 ವೆಚ್ಚ-4/2022, ದಿನಾಂಕ:12-04-2022.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ 2022-23ರ ಆಯವ್ಯಯ ಭಾಷಣದ ಕಂಡಿಕೆ-23 ರಲ್ಲಿ ಮಾನ್ಯ ಮುಖ್ಯಮಂತ್ರಿಯವರು "ರೈತರ ಆದಾಯವನ್ನು ಹೆಚ್ಚಿಸುವ ಧ್ಯೇಯದೊಂದಿಗೆ ರಾಷ್ಟ್ರದಲ್ಲಿಯೇ ಮೊದಲ ಬಾರಿಗೆ 'ಸೆಕೆಂಡರಿ ಕೃಷಿ ನಿರ್ದೇಶನಾಲಯ' ವನ್ನು ಸ್ಥಾಪಿಸಲಾಗಿದೆ. ರೈತ ಉತ್ಪಾದಕ ಸಂಸ್ಥೆಗಳನ್ನು ಬಳಸಿ ಕೃಷಿಯ ಪ್ರಾಥಮಿಕ ಉತ್ಪನ್ನಗಳಿಗೆ ಹೆಚ್ಚಿನ ಮಾರುಕಟ್ಟೆ ಅವಕಾಶಗಳನ್ನು ಸೃಷ್ಟಿಸಲು ಇದು ಸಹಕಾರಿಯಾಗಲಿದೆ" ಎಂಬುದಾಗಿ ಘೋಷಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆದೇಶದಲ್ಲಿ ಕೃಷಿ ಇಲಾಖೆಯಲ್ಲಿ ಕೃಷಿ ನಿರ್ದೇಶಕರ ಅಧ್ಯಕ್ಷತೆಯಲ್ಲಿ ಸೆಕೆಂಡರಿ ಕೃಷಿ ನಿರ್ದೇಶನಾಲಯವನ್ನು ಸ್ಥಾಪಿಸಲಾಗಿದೆ. ಇದು ಕೃಷಿ ಹಾಗೂ ಕೃಷಿ ಸಂಬಂಧಿತ ಇಲಾಖೆಗಳ ಅಧಿಕಾರಿಗಳು ಹಾಗೂ ಕೃಷಿ ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರು ಮತ್ತು ಪ್ರಗತಿಪರ ರೈತರನ್ನು ಒಳಗೊಂಡಿರುತ್ತದೆ. ಸದರಿ ಕೃಷಿ ನಿರ್ದೇಶನಾಲಯದಲ್ಲಿ ಕೃಷಿ ಹಾಗೂ ಕೃಷಿ ಸಂಬಂಧಿತ ಉಪ ಉತ್ಪನ್ನಗಳ ಸದ್ಬಳಕೆ, ಮೌಲ್ಯವರ್ಧನೆ ಹಾಗೂ ಇನ್ನಿತರೆ ಸೆಕೆಂಡರಿ ಚಟುವಟಿಕೆಗಳಿಗೆ ಒತ್ತು ನೀಡುವ ನಿಟ್ಟಿನಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರವರ ಅಧ್ಯಕ್ಷತೆಯಲ್ಲಿ ರಾಜ್ಯ ಮಟ್ಟದ ಸಮಿತಿಯನ್ನು ಮತ್ತು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಸಮಿತಿಯನ್ನು ರಚಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿಯಲ್ಲಿ ಕೃಷಿ ಮತ್ತು ಜಲಾನಯನ ಅಭಿವೃದ್ಧಿ ಇಲಾಖೆಗಳಿಗೆ ಸಂಬಂಧಪಟ್ಟಂತೆ ಮಾನ್ಯ ಮುಖ್ಯಮಂತ್ರಿಯವರು 2022-23ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವ ಯೋಜನೆಗಳನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಅನುಬಂಧ-1 ಮತ್ತು 2ರಲ್ಲಿ ತಿಳಿಸಿರುವಂತೆ ಅನುದಾನವನ್ನು ಕಲ್ಪಿಸಲಾಗಿದ್ದು, ಅದರಂತೆ ಸೂಕ್ತ ಕ್ರಮವಹಿಸುವಂತೆ ತಿಳಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಆಯುಕ್ತರು, ಕೃಷಿ ಇಲಾಖೆ ರವರ ಪ್ರಸ್ತಾವನೆಯಲ್ಲಿ ಮಾನ್ಯ ಮುಖ್ಯಮಂತ್ರಿಯವರು 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-23ರಲ್ಲಿ ಘೋಷಿಸಿರುವ ಹೊಸ ಯೋಜನೆಯಾದ "ಸೆಕೆಂಡರಿ ಕೃಷಿ ನಿರ್ದೇಶನಾಲಯ" ಯೋಜನೆ ಅನುಷ್ಠಾನಕ್ಕಾಗಿ 2022-23ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ: 2401-00-001-1-14 ರಡಿ ರೂ.500.00 ಲಕ್ಷಗಳ ಅನುದಾನವನ್ನು ಒದಗಿಸಲಾಗಿದೆ

..2

ಹೊರಡಿಸಿದೆ
ದಿನಾಂಕ...16/4/22

ಎಂದು ತಿಳಿಸುತ್ತಾ, ಈ ಯೋಜನೆಯ ವಿಸ್ತೃತ ವರದಿಯೊಂದಿಗೆ ಪ್ರಸ್ತಾವನೆ ಸಲ್ಲಿಸಿ, ಅನುಮೋದನೆ ನೀಡುವಂತೆ ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5)ರ ಆರ್ಥಿಕ ಇಲಾಖೆಯ ಹಿಂಬರಹದಲ್ಲಿ 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-23ರ ಘೋಷಣೆ "ರೈತರ ಆದಾಯವನ್ನು ಹೆಚ್ಚಿಸುವ ಧ್ಯೇಯದೊಂದಿಗೆ ರಾಷ್ಟ್ರದಲ್ಲಿಯೇ ಮೊದಲ ಬಾರಿಗೆ "ಸೆಕೆಂಡರಿ ಕೃಷಿ ನಿರ್ದೇಶನಾಲಯ' ವನ್ನು ಸ್ಥಾಪಿಸಲಾಗಿದೆ. ರೈತ ಉತ್ಪಾದಕ ಸಂಸ್ಥೆಗಳನ್ನು ಬಳಸಿ ಕೃಷಿಯ ಪ್ರಾಥಮಿಕ ಉತ್ಪನ್ನಗಳಿಗೆ ಹೆಚ್ಚಿನ ಮಾರುಕಟ್ಟೆ ಅವಕಾಶಗಳನ್ನು ಸೃಷ್ಟಿಸಲು ಇದು ಸಹಕಾರಿಯಾಗಲಿದೆ" ಹೊಸ ಕಾರ್ಯಕ್ರಮವನ್ನು ಲೆಕ್ಕಶೀರ್ಷಿಕೆ: 2401-00-001-1-14-059 ರಡಿ ಒದಗಿಸಲಾದ ರೂ.500.00 ಲಕ್ಷಗಳ ಆಯವ್ಯಯ ಅನುದಾನಕ್ಕೆ ಸೀಮಿತಗೊಳಿಸಿ ಅನುಷ್ಠಾನಗೊಳಿಸಲು ಆರ್ಥಿಕ ಇಲಾಖೆಯು ಸಹಮತಿ ನೀಡಿರುತ್ತದೆ.

ಮೇಲ್ಕಂಡ ಅಂಶಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರಿ ಆದೇಶ ಸಂಖ್ಯೆ: AGRI-AML/112/2022</u>**
**<u>ಬೆಂಗಳೂರು, ದಿನಾಂಕ:13-04-2022.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-23ರಲ್ಲಿ ಘೋಷಿಸಿರುವಂತೆ "ರೈತರ ಆದಾಯವನ್ನು ಹೆಚ್ಚಿಸುವ ಧ್ಯೇಯದೊಂದಿಗೆ ರಾಷ್ಟ್ರದಲ್ಲಿಯೇ ಮೊದಲ ಬಾರಿಗೆ 'ಸೆಕೆಂಡರಿ ಕೃಷಿ ನಿರ್ದೇಶನಾಲಯ' ವನ್ನು ಸ್ಥಾಪಿಸಲಾಗಿದ್ದು, ರೈತ ಉತ್ಪಾದಕ ಸಂಸ್ಥೆಗಳನ್ನು ಬಳಸಿ ಕೃಷಿಯ ಪ್ರಾಥಮಿಕ ಉತ್ಪನ್ನಗಳಿಗೆ ಹೆಚ್ಚಿನ ಮಾರುಕಟ್ಟೆ ಅವಕಾಶಗಳನ್ನು ಸೃಷ್ಟಿಸಲು ಇದು ಸಹಕಾರಿಯಾಗಲಿದೆ" ಎಂಬ ಹೊಸ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಸರ್ಕಾರವು ಅನುಮೋದನೆ ನೀಡಿ ಆದೇಶಿಸಿದೆ.

2022-23ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ: 2401-00001-1-14-059 ರಡಿ ಒದಗಿಸಲಾದ ರೂ.500.00 ಲಕ್ಷಗಳ ಆಯವ್ಯಯ ಅನುದಾನಕ್ಕೆ ಸೀಮಿತಗೊಳಿಸಿ ಈ ಯೋಜನೆಯನ್ನು ಅನುಷ್ಠಾನಗೊಳಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ:ಆಇ 51 ವೆಚ್ಚ-4/2022, ದಿನಾಂಕ:05-04-2022ರಲ್ಲಿ ಹಾಗೂ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 207 ವೆಚ್ಚ-4/2022 ದಿನಾಂಕ:12-04-2022 ರಲ್ಲಿ ಆರ್ಥಿಕ ಇಲಾಖೆಯ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

13/04/2022
(ಪಿ. ಸತ್ಯಭಾಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ).

13/04/22

**ಇವರಿಗೆ-**

1. ಪ್ರಧಾನ ಮಹಾಲೇಖಪಾಲರು, (ಜಿ & ಎಸ್ ಎಸ್ ಎ) / (ಇ & ಆರ್ ಎಸ್ ಎ) / (ಎ ಮತ್ತು ಇ) ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂ: 5398, ಬೆಂಗಳೂರು-01.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ (ಯೋ. ಕಾ.ಸಂ & ಸಾಂ.ಇ) , ಯೋಜನೆ ಇಲಾಖೆ, ಬಹುಮಹಡಿಗಳ ಕಟ್ಟಡ

..3

3. ಸರ್ಕಾರದ ಕಾರ್ಯದರ್ಶಿ( ಆ&ಸಂ), ಆರ್ಥಿಕ ಇಲಾಖೆ, ವಿಧಾನಸೌಧ
4. ಕೃಷಿ ಆಯುಕ್ತರು/ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
5. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು.
6. ಜಂಟಿ ನಿರ್ದೇಶಕರು, ಹುಜೂರು ಖಜಾನೆ, ಬೆಂಗಳೂರು.
7. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ, ಖನಿಜ ಭವನ, ಬೆಂಗಳೂರು
8. ಶಾಖಾ ರಕ್ಷ ಕಡತ/ ಹೆಚ್ಚುವರಿ ಪ್ರತಿಗಳು.

<u>**ಪ್ರತಿಯನ್ನು:**</u>

1. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ, ಬೆಂಗಳೂರು.
3. ಆಂತರಿಕ ಆರ್ಥಿಕ ಸಲಹೆಗಾರರು ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಕೃಷಿ ತೋಟಗಾರಿಕೆ, ರೇಷ್ಮೆ ಮತ್ತು ಪಸಂಮೀ ಇಲಾಖೆ, ಇವರ ಆಪ್ತ ಶಾಖೆ.
4. ಸರ್ಕಾರದ ಉಪ ಕಾರ್ಯದರ್ಶಿ -2, ಕೃಷಿ ಇಲಾಖೆ, ಇವರ ಆಪ್ತ ಸಹಾಯಕರು.

*****